**Dr. RAJKUMAR IAS/KAS ACADEMY**

AN INITIATIVE BY DR. RAJKUMAR FAMILY

DR. RAJKUMAR ACADEMY

# Mission Sarkari Jobs

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ : ನೇಮಕಾತಿ ಅಧಿಸೂಚನೆ

## ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 22-07-2026

## ಲಿಖಿತ ಪರೀಕ್ಷೆಯ ದಿನಾಂಕ : 06-09-2026

---

**"ಕರ್ನಾಟಕ ರಾಜ್ಯ ಪೋಲಿಸ್ ಇಲಾಖೆ"**ಯಲ್ಲಿ, ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇರುವ **ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್)** ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅರ್ಜಿಗಳನ್ನು ಆಹ್ವಾನಿಸಿದೆ.

| ಹುದ್ದೆ | ವೇತನ ಶ್ರೇಣಿ | ವಿದ್ಯಾರ್ಹತೆ |
|---|---|---|
| ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್)<br><br>ಒಟ್ಟು ಹುದ್ದೆಗಳ ಸಂಖ್ಯೆ - 1600 | 37500-76100/- | ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ |

**ವಯೋಮಿತಿ** :

ಸಾಮಾನ್ಯ : 18 - 33 ವರ್ಷಗಳು

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ : 18 - 35 ವರ್ಷಗಳು

ಕರ್ನಾಟಕದ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳು : 18 - 38 ವರ್ಷಗಳು

ಮಾಜಿ ಸೈನಿಕರಿಗೆ : ಸೇವೆ ಸಲ್ಲಿಸಿದ ಅವಧಿ+3 ವರ್ಷಗಳು ವಯೋಮಿತಿ ಸಡಿಲಿಕೆ

**ವಿಶೇಷ ಸೂಚನೆ:** ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್) ಹುದ್ದೆಗೆ ಪುರುಷ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು.

Dr. Rajkumar IAS/KAS Academy

**ಕನ್ನಡ ಭಾಷಾ ಪರೀಕ್ಷೆ:**

ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಮತ್ತು ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಇಲ್ಲವಾದಲ್ಲಿ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿದ್ದು ಗರಿಷ್ಠ **150** ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ **50** ಅಂಕಗಳನ್ನು ಗಳಿಸತಕ್ಕದ್ದು, ಗೈರು ಹಾಜರಾದ / ಕನಿಷ್ಠ **50** ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅರ್ಹರಾಗುವುದಿಲ್ಲ. ಈ ಪ್ರಶ್ನೆಪತ್ರಿಕೆಯನ್ನು ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಶ್ರೇಷ್ಠತೆಗೆ ಅಥವಾ ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ.

## ಪಠ್ಯಕ್ರಮ

## ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್)

| ಪತ್ರಿಕೆ/ Paper | ಪಠ್ಯಕ್ರಮ/Syllabus |
|---|---|
| **ಲಿಖಿತ ಪರೀಕ್ಷೆ (100 ಪ್ರಶ್ನೆಗಳು) (100 ಅಂಕಗಳು)** | • ಸಾಮಾನ್ಯ ಜ್ಞಾನ ವಿಜ್ಞಾನ<br>• ಭೂಗೋಳ<br>• ಇತಿಹಾಸ<br>• ಭಾರತದ ಸಂವಿಧಾನ<br>• ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ<br>• ಮಾನಸಿಕ ಸಾಮರ್ಥ್ಯ<br>• ನೈತಿಕ ಶಿಕ್ಷಣ ಒಳಗೊಂಡ ಸಾಮಾನ್ಯ ಅಧ್ಯಯನ<br><br>**ಋಣಾತ್ಮಕ ಮೌಲ್ಯಮಾಪನ (Negative Valuation)**<br>ಪ್ರತಿ ತಪ್ಪು ಉತ್ತರಕ್ಕೆ 0.25 ಅಥವಾ 1/4 ಅಂಕಗಳು |

Dr.Rajkumar IAS/KAS Academy

| **ಕಡ್ಡಾಯ ಕನ್ನಡ (150 ಅಂಕಗಳು)** | ಪರೀಕ್ಷಾ ದಿನಾಂಕವನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು<br>ಅರ್ಹತೆ ಹೊಂದಲು ಕನಿಷ್ಠ ಅಂಕಗಳು: 50<br><br>**(ಕಡ್ಡಾಯ ಕನ್ನಡ ಪರೀಕ್ಷೆಯಿಂದ ವಿನಾಯಿತಿ ಇರದ ಅಭ್ಯರ್ಥಿಗಳಿಗೆ ಮಾತ್ರ)** |
|---|---|

## ದೇಹದಾರ್ಡ್ಯತೆ ಪರೀಕ್ಷೆ (Physical Standard Test)

ಲಿಖಿತ ಪರೀಕ್ಷೆಯಲ್ಲಿ 1:5ರ ಅನುಪಾತದಡಿ ಅರ್ಹಗೊಂಡ ಅಭ್ಯರ್ಥಿಗಳಿಗೆ

| | |
|---|---|
| ಪುರುಷ<br>ಮತ್ತು<br>ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 168 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :<br>86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಠ ವಿಸ್ತರಣೆ 5 ಸೆಂ. ಮೀ. |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ:***<br>5 ಸೆಂ. ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ. ಮೀ.ಗಳಿಗಿಂತ ಕಡಿಮೆ ಇಲ್ಲದಂತೆ |

## ಸಹಿಷ್ಣುತೆ ಪರೀಕ್ಷೆ (Endurance Test)

ಮೇಲಿನ ದೇಹದಾರ್ಡ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ

| ದೈಹಿಕ ಸಹಿಷ್ಣುತೆ ಪರೀಕ್ಷೆ | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ / ದೂರ** |
| ಪುರುಷ ಅಭ್ಯರ್ಥಿಗಳಿಗೆ | 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 2 ನಿಮಿಷಕ್ಕಿಂತ ಮೀರದಂತೆ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**ಹುದ್ದೆಗಳ ವರ್ಗೀಕರಣ, ಅಧಿಸೂಚನೆ ಕುರಿತು ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಪ್ರಾಧಿಕಾರದ ವೆಬ್ ಸೈಟ್ :**

https://cetonline.karnataka.gov.in/kea

---

**ಉಚಿತ ಸಮಾಲೋಚನೆ ಮತ್ತು ಮಾರ್ಗದರ್ಶನಕ್ಕಾಗಿ ಇಂದೇ ನಮ್ಮ ಅಕಾಡೆಮಿಗೆ ಭೇಟಿ ನೀಡಿ.**

**ಡಾ.ರಾಜ್ ಕುಮಾರ್ ಐ.ಎ.ಎಸ್/ಕೆ.ಎ.ಎಸ್ ಅಕಾಡೆಮಿ**

#2952/ಇ, ಪಶ್ಚಿಮ ಕಾರ್ಡ್ ರಸ್ತೆ, ಮಾರುತಿ ಮಂದಿರ ಎದುರು,
ವಿಜಯನಗರ, ಬೆಂಗಳೂರು – 560040
ಸಂಪರ್ಕಿಸಿ: 9108448444/9108449444 ವೆಬ್ ಸೈಟ್: www.drrajkumaracademy.com

Dr.Rajkumar IAS/KAS Academy